ಧರ್ಮಸ್ಥಳದ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು.

532(5022) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಧರ್ಮಸ್ಥಳದಲ್ಲಿರುವ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯ ಸರ್ಕಾರದ ಮಂದಿದೆಯೆ?

ಆ) ಹೌದಾದಲ್ಲಿ ಸದರಿ ಆಸ್ಪತ್ರೆಯನ್ನು 30 ಬೆಡ್‌ಗಳ ಸಮುದಾಯ ಆಸ್ಪತ್ರೆಯನ್ನಾಗಿ ಪರಿವರ್ತಿಸುವ ಬಗ್ಗೆ ಸಕಾಲಿಕ ಕ್ರಮವನ್ನು ಜರುಗಿಸಲಾಗುವುದೆ?

ಇ) ಪ್ರಸಿದ್ಧ ಯಾತ್ರಾ ಸ್ಥಳ ಹಾಗೂ ಸುತ್ತುಮುತ್ತಲಿನ ಗ್ರಾಮಾಂತರ ಪ್ರದೇಶಗಳ ಜನರ ಅನುಕೂಲಕ್ಕಾಗಿ ಕೂಡಲೇ ಮೇಲ್ದರ್ಜೆಗೇರಿಸುವ ಕ್ರಮವನ್ನು ಸರ್ಕಾರ ಕೈಗೊಳ್ಳುವುದೇ?

ಡಾ: ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಒಂದು ಪ್ರಸ್ತಾವನೆಯು ಸ್ವೀಕೃತವಾಗಿದೆ.

ಆ) ಆಯವ್ಯಯ ಮಿತಿಯನ್ನು ದೃಷ್ಟಿಯಲ್ಲಿಟ್ಟುಕೊಂಡು ಪ್ರಸ್ತುತ ಯಾವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಉದ್ದೇಶವು ಸರ್ಕಾರಕ್ಕೆ ಇರುವುದಿಲ್ಲ.

ಇ) ಮೇಲೆ (ಅ) ರಲ್ಲಿ ನೀಡಿದ ಉತ್ತರದಿಂದ ಪ್ರಶ್ನೆ ಉದ್ಭವಿಸುವುದಿಲ್ಲ.

ಶ್ರೀ ಕೆ. ಪ್ರಭಾಕರ ಬಂಗೇರ :— ಮಾನ್ಯ ಅಧ್ಯಕ್ಷರೇ, ನನ್ನ ಮೊದಲನೇ ಪ್ರಶ್ನೆಗೆ ಪ್ರಸ್ತಾವನೆ ಸ್ವೀಕೃತಿ ಎಂದು ಉತ್ತರದಲ್ಲಿ ತಿಳಿಸಿದ್ದಾರೆ. ಎರಡನೇ ಪ್ರಶ್ನೆಗೆ ಈ ವರ್ಷ ಮೇಲ್ದರ್ಜೆಗೆ ಏರಿಸುವ ಉದ್ದೇಶ ಇಲ್ಲ ಎಂದು ತಿಳಿಸಿದ್ದಾರೆ. ನನ್ನ ಅಪೇಕ್ಷೆ ಏನೆಂದರೆ 2000-2001ನೇ ಸಾಲಿನ ಆಯವ್ಯಯದಲ್ಲಿ ಹಣವನ್ನು ನೀಡಿ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸುವ ಕೆಲಸವನ್ನು ಮಾಡಿಸಬೇಕು. ಧರ್ಮಸ್ಥಳ ಕ್ಷೇತ್ರಕ್ಕೆ ಪ್ರತಿನಿತ್ಯ ಹತ್ತು ಸಾವಿರಕ್ಕಿಂತಲೂ ಹೆಚ್ಚು ಯಾತ್ರಾರ್ಥಿಗಳು ಬರುತ್ತಾರೆ ಮತ್ತು ಅವರ ಜೊತೆಗೆ ಅಲ್ಲಿಯ ಗ್ರಾಮಾಂತರ ಪ್ರದೇಶದ ಜನರಿಗೆ ಅನುಕೂಲವಾಗುವ ದೃಷ್ಟಿಯಿಂದ ಅಲ್ಲಿಯ ಸರ್ಕಾರಿ ಆಸ್ಪತ್ರೆಯನ್ನು 30 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಬೇಕೆಂದು ತಮ್ಮ ಮೂಲಕ ಮಾನ್ಯ ಸಚಿವರನ್ನು ಕೇಳಿಕೊಳ್ಳುತ್ತೇನೆ.

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಪರವಾಗಿ) :— ಮಾನ್ಯ ಅಧ್ಯಕ್ಷರೆ, ಇಲಾಖೆಯಲ್ಲಿ ದೊರೆಯಬಹುದಾದ ಆಯವ್ಯಯದ ಹಿನ್ನೆಲೆಯಲ್ಲಿ ಇದರ ಬಗ್ಗೆ ಈವರೆಗೆ ತೀರ್ಮಾನ ಮಾಡಲಿಕ್ಕೆ ಆಗಲಿಲ್ಲ. ಹಣಕಾಸು ಸಹಾಯ ಒದಗಿಬಂದರೆ ಮಾನ್ಯ ಸದ್ಯಸರ ಕೋರಿಕೆಯನ್ನು ಪರಿಶೀಲನೆ ಮಾಡುತ್ತೇವೆ.

ಶ್ರೀ ಕೆ. ಪ್ರಭಾಕರ ಬಂಗೇರ :— ಮಾನ್ಯ ಅಧ್ಯಕ್ಷರೇ, ಧರ್ಮಸ್ಥಳ ಬಹಳ ಇಂಪಾರ್ಟೆಂಟ್ ಆಗಿರುವುದರಿಂದ ಮಾನ್ಯ ಸದಸ್ಯರು ಕೇಳಿದ ಪ್ರಶ್ನೆ ಬಗ್ಗೆ ಅತ್ಯಂತ ಸಹಾನುಭೂತಿಯಿಂದ ಸರ್ಕಾರ ಪರಿಶೀಲಿನೆ ಮಾಡುತ್ತದೆ.